## ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ:-** ಜೆ.ಎಸ್.ಎಸ್ ಮಹಾವಿದ್ಯಾಪೀಠ ಜಗದ್ಗುರು ಡಾ|| ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು ಇವರ ವತಿಯಿಂದ ನಂಜನಗೂಡು ತಾ|| ಸುತ್ತೂರು ಗ್ರಾಮದಲ್ಲಿ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸ-8/ಸಿಆರ್-02/2019-20, ದಿನಾಂಕ:28.05.2019.

- - -

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ. 10.00 ಲಕ್ಷ, ತಾಲ್ಲೂಕು ಕೇಂದ್ರಸ್ಥಾನ ರೂ. 25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ. 50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್ ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆಯುಕ್ತರ ಪ್ರಸ್ತಾವನೆಯಲ್ಲಿ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ ರವರ ಶಿಫಾರಸ್ಸಿನೊಂದಿಗೆ ಜೆ.ಎಸ್.ಎಸ್ ಮಹಾವಿದ್ಯಾಪೀಠ ಜಗದ್ಗುರು ಡಾ|| ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತಿ, ಮೈಸೂರು, ಇವರ ವತಿಯಿಂದ ನಂಜನಗೂಡು ತಾಲ್ಲೂಕು ಸುತ್ತೂರು ಗ್ರಾಮದಲ್ಲಿ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ರೂ.1100.00 ಲಕ್ಷಗಳ ಅಂದಾಜು ಪಟ್ಟಿ ಹಾಗೂ ಸಂಬಂಧಿಸಿದ ದಾಖಲಾತಿಗಳೊಂದಿಗೆ ವಿದ್ಯಾರ್ಥಿನಿಲಯ ನಿರ್ಮಾಣಕ್ಕೆ ರೂ.1000.00 ಲಕ್ಷಗಳ ಸಹಾಯಧನ ಮಂಜೂರಾತಿ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಜೆ.ಎಸ್.ಎಸ್ ಮಹಾವಿದ್ಯಾಪೀಠ ಜಗದ್ಗುರು ಡಾ|| ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತಿ, ಮೈಸೂರು ಈ ಸಂಸ್ಥೆಯ ಹಿಂದುಳಿದ ಸಮುದಾಯಕ್ಕೆ ಸೇರಿರುತ್ತದೆ. ಸಂಸ್ಥೆಯವರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಮಾಡುತ್ತಿರುವುದರಿಂದ ನಿಯಮಾನುಸಾರ ರೂ.10.00 ಲಕ್ಷಗಳು ಮಾತ್ರ ಅನುದಾನ ಮಂಜೂರು ಮಾಡಲು ಅವಕಾಶವಿದ್ದು, ಸದರಿ ಸಂಸ್ಥೆಯು ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 38 ಬಿಎಂಎಸ್ 2019,**

**ಬೆಂಗಳೂರು, ದಿನಾಂಕ: 24-02-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಉಲ್ಲೇಖ(2) ರಂತೆ ಪರಿಶೀಲಿಸಿ, ಜೆ.ಎಸ್.ಎಸ್ ಮಹಾವಿದ್ಯಾಪೀಠ, ಜಗದ್ಗುರು ಡಾ|| ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು ಇವರ ವತಿಯಿಂದ ನಂಜನಗೂಡು ತಾ|| ಸುತ್ತೂರು ಗ್ರಾಮದಲ್ಲಿ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ರೂ. 500.00 (ಐದುನೂರು ಲಕ್ಷಗಳು ಮಾತ್ರ) ಲಕ್ಷಗಳ ಅನುದಾನವನ್ನು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

**ಷರತ್ತುಗಳು:-**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು, ಮೇಲೆ ಓದಲಾದ (1) ಮತ್ತು (2)ರ ಮಾರ್ಗಸೂಚಿಗಳ ಷರತ್ತಿನಂತೆ ಸದರಿ ಸಂಸ್ಥೆಯು ಅರ್ಹತೆ ಹೊಂದಿದೆಯೇ

24/02/22

ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.ಮಾರ್ಗಸೂಚಿಗಳ ಪ್ರಕಾರ ಸಂಸ್ಥೆ ಅನುದಾನ ಪಡೆಯಲು ಅರ್ಹತೆ ಇದ್ದಲ್ಲಿ ವಿದ್ಯಾರ್ಥಿನಿಲಯದ ಕಟ್ಟಡವನ್ನು ನಿರ್ಮಿಸಲು ಸಂಸ್ಥೆಯ ಹೆಸರಿನಲ್ಲಿ ನಿವೇಶನ ಹೊಂದಿದೆಯೇ ಎಂಬುದರ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಸಕ್ಷಮ ಪ್ರಾಧಿಕಾರದಿಂದ ಅನುಮೋದಿತ ಕಟ್ಟಡದ ನಕ್ಷೆ ಮತ್ತು ಕಟ್ಟಡ ಕಟ್ಟುವ ಪರವಾನಗಿಯನ್ನು ಪಡೆದುಕೊಂಡ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು, ಬಾಕಿ ಮೊತ್ತವನ್ನು ಟ್ರಸ್ಟ್ ಭರಿಸುವ ಬಗ್ಗೆ ಮುಚ್ಚಳಿಕೆ ಪತ್ರ ಪಡೆಯತಕ್ಕದ್ದು. ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಸಂಸ್ಥೆಯು ಮಾರ್ಗಸೂಚಿಗಳನುಸಾರ ಅರ್ಹತೆ ಹೊಂದಿದಲ್ಲಿ ಮಾತ್ರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸದರಿ ಸಂಸ್ಥೆಗೆ ಯೋಜನೆಯ ಮಾರ್ಗಸೂಚಿಗಳನುಸಾರ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು. ಸದರಿ ಸಂಸ್ಥೆ ಹಿಂದುಳಿದ ವರ್ಗಗಳ ಯಾವ ಪ್ರವರ್ಗದಡಿ ಬರುತ್ತದೆ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

2. ಆಯುಕ್ತರು,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ನಿಯಮಾನುಸಾರ ಮಾರ್ಗಸೂಚಿಗಳಂತೆ ಸದ್ಬಳಕೆ ಮಾಡಿರುವ ಬಗ್ಗೆ ಅಗತ್ಯ ಪರಿಶೀಲನೆಯಲ್ಲಿ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.
4. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಗಳಿಗೆ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.
5. ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿದ ನಂತರ ಬಿಡುಗಡೆ ಮಾಡುವುದು.
6. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ (1) ಮತ್ತು (2)ರ ಮಾರ್ಗಸೂಚಿಗಳನ್ನು ತಪ್ಪದೆ ಪಾಲಿಸತಕ್ಕದ್ದು.
7. ಮಂಜೂರಾದ ಅನುದಾನವನ್ನು 2 ವರ್ಷಗಳೊಳಗಾಗಿ ಕಾಮಗಾರಿಗೆ ವಿನಿಯೋಗಿಸದಿದ್ದಲ್ಲಿ, ಸದರಿ ಅನುದಾನವನ್ನು ದಂಡ ಸಮೇತವಾಗಿ ಸರ್ಕಾರದಿಂದ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಈ ವೆಚ್ಚವನ್ನು ಲೆಕ್ಕಶೀರ್ಷಿಕೆ:2225-03-001-0-05 (ರಾಜ್ಯವಲಯ ಯೋಜನೆ) ರಡಿ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 12 ವೆಚ್ಚ-3/2022 ದಿನಾಂಕ:14.02.2022 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಮಾನ್ಯ ಇಲಾಖೆ ಸಚಿವರ ಆದೇಶದನ್ವಯ ಹಾಗೂ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenparveen 24/02/2022

**(ಶಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.